ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1374 (1182)
ಮಾನ್ಯ ಸದಸ್ಯರ ಹೆಸರು	ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	23/09/2021
ಉತ್ತರಿಸುವವರು	ಮಾನ್ಯ ಕಾರ್ಮಿಕ ಸಚಿವರು

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ಅಸಂಘಟಿತ ಕಾರ್ಮಿಕ ವರ್ಗದಲ್ಲಿ ಯಾವ ಯಾವ ಕಾರ್ಮಿಕರು ಬರುತ್ತಾರೆ;	**ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:-** ಕರ್ನಾಟಕ ರಾಜ್ಯ ಸರ್ಕಾರವು ಅಸಂಘಟಿತ ವಲಯದ 43 ವರ್ಗಗಳನ್ನು ಗುರುತಿಸಿದ್ದು, ಅದರಲ್ಲಿ 43ನೇ ವರ್ಗವಾದ ಇತರೆ ವರ್ಗಗಳಲ್ಲಿ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಕಾಯ್ದೆ 2008ರ ಕಲಂ 2(m) ಹಾಗೂ ಕಲಂ 2(l) ರ ವ್ಯಾಖ್ಯಾನಕ್ಕೆ ಒಳಪಡುವ ಎಲ್ಲಾ ಅರ್ಹ ಕಾರ್ಮಿಕರು ಅಸಂಘಟಿತ ಕಾರ್ಮಿಕರಾಗಿರುತ್ತಾರೆ. ಸರ್ಕಾರವು ಗುರುತಿಸಿರುವ 43 ವರ್ಗಗಳ **ಅಸಂಘಟಿತ ಕಾರ್ಮಿಕರ ಪಟ್ಟಿಯನ್ನು ಅನುಬಂಧ-1** ರಲ್ಲಿ ಲಗತ್ತಿಸಿದೆ.
ಆ)	ಅಸಂಘಟಿತ ಕಾರ್ಮಿಕ ವರ್ಗದವರಿಗೆ ಸರ್ಕಾರದಿಂದ ಇರುವ ಕಾರ್ಯಕ್ರಮಗಳೇನು; ಅವುಗಳ ಅನುಷ್ಠಾನ ಸಮರ್ಪಕವಾಗಿ ನಡೆಯುತ್ತಿದೆಯೇ;	**ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:-** ಕರ್ನಾಟಕ ಸರ್ಕಾರವು ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯ ಮೂಲಕ ಅಸಂಘಟಿತ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಒದಗಿಸಲು ಈ ಕೆಳಕಂಡ ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿದೆ. (1) **ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ:-** ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರಿಗೆ ಸಂಬಂಧಪಟ್ಟಂತೆ ಯೋಜನೆಯಡಿ ಈ ಕೆಳಕಂಡ ಸೌಲಭ್ಯಗಳನ್ನು ನೀಡಲಾಗುತ್ತಿದೆ. (ಅ) **ಅಪಘಾತ ಪರಿಹಾರ ಸೌಲಭ್ಯ** : ಯೋಜನೆಯಡಿ, ಅಪಘಾತದಿಂದಾದ ಮರಣ ಹೊಂದಿದ ಪ್ರಕರಣಗಳಲ್ಲಿ ರೂ. 5 ಲಕ್ಷದ ಪರಿಹಾರ, ಸಂಪೂರ್ಣ ಶಾಶ್ವತ ದುರ್ಬಲತೆ ಪ್ರಕರಣಗಳಲ್ಲಿ ರೂ.2 ಲಕ್ಷದ ಪರಿಹಾರ ಮತ್ತು ಒಳರೋಗಿಯಾಗಿ ಚಿಕಿತ್ಸೆ ಪಡೆದವರಿಗೆ ರೂ.1 ಲಕ್ಷದವರೆಗೂ ಚಿಕಿತ್ಸಾ ವೆಚ್ಚದ ಮರುಪಾವತಿ ನೀಡಲಾಗುತ್ತಿದೆ. (ಆ) **ಶೈಕ್ಷಣಿಕ ಧನ ಸಹಾಯ** : ಅಪಘಾತದಿಂದ ನಿಧನರಾದ ಅಥವಾ ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಫಲಾನುಭವಿಗಳ ಇಬ್ಬರು ಮಕ್ಕಳಿಗೆ ಪದವಿಪೂರ್ವ ವ್ಯಾಸಂಗದವರೆಗೆ ವಾರ್ಷಿಕ ರೂ.10,000/-ಗಳ ಶೈಕ್ಷಣಿಕ ಸಹಾಯಧನ ನೀಡಲಾಗುತ್ತಿದೆ.

		(ಇ) ಶ್ರಮ ಸಮ್ಮಾನ ಪ್ರಶಸ್ತಿ : ಪ್ರತಿ ವರ್ಷ ಮಾರ್ಚ್ 01 ರಂದು ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಕಾರ್ಮಿಕ ಸಮ್ಮಾನ ದಿನಾಚರಣೆ ಆಚರಿಸಿ, ಉತ್ತಮ ಹಾಗೂ ಸುರಕ್ಷತಾ ಚಾಲನೆ ಮಾಡಿದ ತ್ರಿಚಕ್ರ ಹಾಗೂ ನಾಲ್ಕು ಚಕ್ರದ ವಾಹನ ಚಾಲಕರಿಗೆ ಪ್ರತಿ ಜಿಲ್ಲೆಗೆ ಪ್ರತ್ಯೇಕವಾಗಿ ಪ್ರಥಮ, ದ್ವಿತೀಯ ಹಾಗೂ ತೃತೀಯ ಪ್ರಶಸ್ತಿ ನೀಡಿ ಗೌರವಿಸಲಾಗುತ್ತಿದೆ. **(ಈ) ಅಪಘಾತ ಜೀವ ರಕ್ಷಕ:-** ಅಪಘಾತ ಜೀವರಕ್ಷಕ ಕಾರ್ಯಕ್ರಮದಡಿ ಅಪಘಾತಕ್ಕೊಳಗಾದ ಗಾಯಾಳುಗಳನ್ನು ರಕ್ಷಿಸುವ ಜೀವರಕ್ಷಕರನ್ನಾಗಿಸುವ ಉದ್ದೇಶದಿಂದ ಚಾಲಕರಿಗೆ ಪ್ರಥಮ ಚಿಕಿತ್ಸಾ ತರಬೇತಿಯನ್ನು ನೀಡಲಾಗುತ್ತಿದೆ. ಹಾಗೂ ತರಬೇತಿ ಪಡೆದ ಚಾಲಕರಿಗೆ ಪ್ರಥಮ ಚಿಕಿತ್ಸಾ ಕಿಟ್ ಹಾಗೂ ಪ್ರಮಾಣ ಪತ್ರ ನೀಡಲಾಗುವುದು. (2) <u>ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ:-</u> ಈ ಯೋಜನೆಯಡಿ 11 ಅಸಂಘಟಿತ ವರ್ಗಗಳಾದ "ಹಮಾಲರು, ಮನೆಗೆಲಸದವರು, ಚಿಂದಿ ಆಯುವವರು, ಟೈಲರ್ಸ್, ಮೆಕ್ಯಾನಿಕ್, ಅಗಸರು, ಅಕ್ಕಸಾಲಿಗರು, ಕಮ್ಮಾರರು, ಕುಂಬಾರರು, ಕ್ಷೌರಿಕರು ಹಾಗೂ ಭಟ್ಟಿ ಕಾರ್ಮಿಕ"ರನ್ನು ನೋಂದಾಯಿಸಿ ಸ್ಮಾರ್ಟ್ ಕಾರ್ಡ್ ವಿತರಿಸಲಾಗುತ್ತಿದೆ. ಪ್ರತಿ ವರ್ಷ ಮಾರ್ಚ್ 01 ರಂದು ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಕಾರ್ಮಿಕ ಸಮ್ಮಾನ ದಿನಾಚರಣೆ ಆಚರಿಸಿ, ಸದರಿ 11 ಅಸಂಘಟಿತ ವಲಯಗಳಲ್ಲಿ ವಿಶೇಷ ಸಾಧನೆ ಮಾಡಿದ ಕಾರ್ಮಿಕರನ್ನು ಗುರುತಿಸಿ, ಪ್ರತಿಯೊಂದು ಜಿಲ್ಲೆಗೆ ಪ್ರತಿಯೊಂದು ವಲಯಕ್ಕೆ ಪ್ರಥಮ, ದ್ವಿತೀಯ ಹಾಗೂ ತೃತೀಯ ಪ್ರಶಸ್ತಿ ನೀಡಿ ಗೌರವಿಸಲಾಗುತ್ತಿದೆ.
ಇ)	ಅಸಂಘಟಿತ ವಲಯಕ್ಕೆ ಹೊಸದಾಗಿ ಕಾರ್ಮಿಕರನ್ನು ಸೇರಿಸುವ ಉದ್ದೇಶವಿದೆಯೇ? (ಇದ್ದಲ್ಲಿ, ವಿವರ ನೀಡುವುದು)	**ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:-** ಕೇಂದ್ರ ಸರ್ಕಾರದ ಕಾರ್ಮಿಕ ಮತ್ತು ಉದ್ಯೋಗ ಮಂತ್ರಾಲಯವು ಅಸಂಘಟಿತ ಕಾರ್ಮಿಕರ ದತ್ತಾಂಶವನ್ನು ಸಂಗ್ರಹಿಸುವ ಉದ್ದೇಶದಿಂದ, ಅಸಂಘಟಿತ ಕಾರ್ಮಿಕರ ಸಮಗ್ರ ರಾಷ್ಟ್ರೀಯ ದತ್ತಾಂಶ ಸಂಗ್ರಹಿಸಲು ತಂತ್ರಾಂಶ (NDUW-National Database for Unorganised Worker) ವನ್ನು ಅಭಿವೃದ್ಧಿ ಪಡಿಸಿ, ದಿನಾಂಕ:26-08-2021ರಂದು ಚಾಲನೆ ನೀಡಿರುತ್ತದೆ. ಈ ಪೋರ್ಟಲ್‌ನಲ್ಲಿ ಸುಮಾರು 156 ವರ್ಗಗಗಳನ್ನು ಗುರುತಿಸಿದ್ದು, ಇನ್ನುಳಿದ ವರ್ಗದ ಅರ್ಹ ಅಸಂಘಟಿತ ಕಾರ್ಮಿಕರಿಗೆ ನೋಂದಣಿಗೆ ಅವಕಾಶ ಕಲ್ಪಿಸಲಾಗಿದೆ.

ಕಾಇ 417 ಎಲ್‌ಇಟಿ 2021

(ಅರಬೈಲ್ ಶಿವರಾಮ ಹೆಬ್ಬಾರ್)
ಕಾರ್ಮಿಕ ಸಚಿವರು

ವಿಧಾನ ಪರಿಷತ್ತು ಸದಸ್ಯರಾದ ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1374

ಅನುಬಂಧ-1

ಸರ್ಕಾರ ಗುರುತಿಸಿರುವ 43 ಅಸಂಘಟಿತ ವರ್ಗದ ಕಾರ್ಮಿಕರ ಪಟ್ಟಿ

1. ದರ್ಜಿಗಳು
2. ದೋಬಿಗಳು
3. ಹಮಾಲಿಗಳು
4. ಹೋಟೆಲ್ ಕಾರ್ಮಿಕರು
5. ಆಟೋ ಮತ್ತು ಟ್ಯಾಕ್ಸಿ ಚಾಲಕರು ಹಾಗೂ ಖಾಸಗಿ ಬಸ್, ಲಾರಿ ಚಾಲಕರು ಹಾಗೂ ನಿರ್ವಾಹಕರು
6. ಆಟೋಮೊಬೈಲ್ ವರ್ಕ್‌ಶಾಪ್‌ಗಳಲ್ಲಿ ಕೆಲಸ ಮಾಡುವ ಕಾರ್ಮಿಕರು ಮತ್ತು
7. ಗೃಹ ಕಾರ್ಮಿಕರು
8. ಕೃಷಿ/ತೋಟಗಾರಿಕೆ/ಹೈನುಗಾರಿಕೆ ಕೆಲಸಗಳಲ್ಲಿ ತೊಡಗಿರುವ ಕೂಲಿ ಕಾರ್ಮಿಕರು
9. ನಾರಿನ ಉದ್ದಿಮೆಯಲ್ಲಿ ತೊಡಗಿರುವ ಕೂಲಿ ಕಾರ್ಮಿಕರು
10. ಮನೆಗಳಲ್ಲಿ ನೇಯ್ಗೆ ಕೆಲಸ ಮಾಡುವ ನೇಕಾರರು
11. ಮೀನುಗಾರರು
12. ಕುಂಬಾರರು
13. ಚಮ್ಮಾರರು
14. ಕ್ಷೌರಿಕರು
15. ಕಸಾಯಿ ಖಾನೆ ಕಾರ್ಮಿಕರು
16. ಕಮ್ಮಾರರು
17. ಚಿನಿವಾರರು/ಅಕ್ಕಸಾಲಿಗರು
18. ಮನೆಗಳಲ್ಲಿ ಬೀಡಿ ಕಟ್ಟುವವರು
19. ಮನೆಗಳಲ್ಲಿ ಅಗರಬತ್ತಿ ತಯಾರಿಸುವ ಕಾರ್ಮಿಕರು
20. ಶಿಲ್ಪಕಾರರು/ ಹಸ್ತ ಕುಶಲ ಕಾರ್ಮಿಕರು
21. ಚಿತ್ರ ಬಿಡಿಸುವವರು
22. ಬಿದಿರಿನ ವಸ್ತುಗಳನ್ನು ತಯಾರು ಮಾಡುವವರು
23. ಖಾದ್ಯ ತೈಲ/ಮನೆಯಲ್ಲಿ ಆಹಾರ ವಸ್ತುಗಳ ಸಂಸ್ಕರಣೆ ಕೆಲಸದಲ್ಲಿ ತೊಡಗಿರುವವರು.
24. ಟಿಂಬರ್ ಕೆಲಸದಲ್ಲಿ ತೊಡಗಿರುವ ಕಾರ್ಮಿಕರು
25. ರೇಷ್ಮೆ ಕಾರ್ಮಿಕರು
26. ಕಾಟನ್ ಜಿನ್ನಿಂಗ್ ಮತ್ತು ಪ್ರೊಸೆಸಿಂಗ್ ಕೆಲಸದಲ್ಲಿ ತೊಡಗಿರುವ ಕಾರ್ಮಿಕರು
27. ಮುದ್ರಣ ಕೆಲಸದಲ್ಲಿ ತೊಡಗಿರುವ ಕಾರ್ಮಿಕರು
28. ಕಲ್ಲು ಒಡೆಯುವ ಕಾರ್ಮಿಕರು
29. ಚರ್ಮ ಹದ ಮಾಡುವ ಕೆಲಸದಲ್ಲಿ ತೊಡಗಿರುವ ಕಾರ್ಮಿಕರು
30. ಎಲ್ಲಾ ವಿಧದ ಮಿಲ್‌ಗಳಲ್ಲಿ ಕೆಲಸ ಮಾಡುವ ಕಾರ್ಮಿಕರು
31. ಬೀದಿ ಬದಿಯ ಮಾರಟಗಾರರು

32. ಚಾಲಕರು/ನಿರ್ವಾಹಕರು/ಸಹಾಯಕರು/ ಕ್ಲೀನರ್‌ಗಳು/ ಗಾಡಿ ಎಳೆಯುವವರು/ ರಿಕ್ಷಾ ವಾಲಾಗಳು/ ಟಾಂಗಾವಾಲಾಗಳು.
33. ಎಲ್ಲಾ ಬಗೆಯ ರಿಪೇರಿ ಕೆಲಸ ಮತ್ತು ತ್ಯಾಜ್ಯ ವಿಲೇವಾರಿ ಕೆಲಸದಲ್ಲಿ ತೊಡಗಿರುವ ಕಾರ್ಮಿಕರು
34. ಚಿಂದಿ ಆಯುವವರು
35. ಅಡಿಗೆ ಕೆಲಸಗಾರರು/ಕಲ್ಯಾಣ ಮಂಟಪಗಳಲ್ಲಿ ಶುಚಿ ಕೆಲಸದಲ್ಲಿ ತೊಡಗಿರುವವರು/ಮಧ್ಯಾಹ್ನದ ಬಿಸಿ ಊಟದ ಕಾರ್ಮಿಕರು ಮತ್ತು ಸಹಾಯಕರು
36. ಸಫಾಯಿ ಕರ್ಮಚಾರಿಗಳು
37. ಕಛೇರಿಗಳಲ್ಲಿ ಶುಚಿ ಕೆಲಸದಲ್ಲಿ ತೊಡಗಿರುವ ಗುತ್ತಿಗೆ ಕಾರ್ಮಿಕರು
38. ಗುತ್ತಿಗೆ ಆಧಾರದ ಮೇಲೆ ನೇಮಕವಾಗಿರುವ ಭದ್ರತಾ ಸಿಬ್ಬಂದಿ/ವಾಚ್‌ಮೆನ್‌ಗಳು
39. ಪೋರ್ಟರ್
40. ಪ್ರವಾಸಿ ಗೈಡ್‌ಗಳು
41. ಮಂಡಕ್ಕಿ ಭಟ್ಟಿ ಕಾರ್ಮಿಕರು
42. ಛಾಯಾವೃತ್ತಿ ಕಾರ್ಮಿಕರು
43. ಇತರೆ ವರ್ಗ (ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಕಾಯ್ದೆ 2008ರ ಕಲಂ 2(ಟ) ಹಾಗೂ ಕಲಂ 2 (ಟ) ರ ವ್ಯಾಖ್ಯಾನಕ್ಕೆ ಒಳಪಡುವ ಅಸಂಘಟಿತ ವರ್ಗದ ಎಲ್ಲಾ ಕಾರ್ಮಿಕರು)